ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ : 22ನೇ ಜುಲೈ, 2019

ಕಲಬುರಗಿ ಕಂದಾಯ ವಿಭಾಗದ ಖಾಲಿ ಇರುವ ಹುದ್ದೆಗಳ ಬಗ್ಗೆ

ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

472 (465) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಕಂದಾಯ ವಿಭಾಗ ವ್ಯಾಪ್ತಿಯಲ್ಲಿ ಬರುವ ಕಲಬುರಗಿ, ಬೀದರ್, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿರುವ ಕೃಷಿ ಇಲಾಖೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಹುದ್ದೆಗಳು ಖಾಲಿ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕಛೇರಿಗಳಿಗೆ ಮಂಜೂರಾಗಿರುವ ಹಾಗೂ ಭರ್ತಿಯಾಗಿರುವ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಖಾಲಿ ಉಳಿದಿರುವ ಹುದ್ದೆಗಳ ಭರ್ತಿಗಾಗಿ ಸರ್ಕಾರದ ಕೈಗೊಂಡಿರುವ ಕ್ರಮಗಳೇನು ; (ಸಮಗ್ರ ಮಾಹಿತಿ ನೀಡುವುದು)

(ಈ) ಹುದ್ದೆಗಳು ಖಾಲಿ ಉಳಿದಿರುವುದರಿಂದ ಯೋಜನೆಗಳ ಅನುಷ್ಠಾನಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ನಿಟ್ಟಿನಲ್ಲಿ ಯಾವ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ ?